# ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ

# DIRECTORATE OF MEDICAL EDUCATION

Ananda Rao Circle, Bangalore-560009.

ಸಂಖ್ಯೆ: ವೈಶಿ/ಎಸ್ಆರ್‌ಓ(1)/56/2018–19 ದಿನಾಂಕ:06 –09–2018

**ಅಧಿಸೂಚನೆ**

ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ ಈ ಸಂಸ್ಥೆಯ ನಿರ್ದೇಶಕರ ಹುದ್ದೆಯ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗದಿತ ಕನಿಷ್ಠ ವಿದ್ಯಾರ್ಹತೆ ಮತ್ತು ಇತರೆ ವಿವರಗಳು ಎಂ.ಸಿ.ಐ ನಿಯಮಾವಳಿಗಳನ್ವಯ ಹಾಗೂ ಸದರಿ ಸಂಸ್ಥೆಯ ಬೈಲಾಗಳನ್ವಯ ಪರಿಗಣಿಸಲಾಗುವುದು.

**ಅರ್ಹತಾ ಮಾನದಂಡಗಳು:**

1. ಭಾರತೀಯ ವೈದ್ಯಕೀಯ ಪರಿಷತ್ತಿನಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಿಂದ ವೈದ್ಯಕೀಯ ಶಿಕ್ಷಣದಲ್ಲಿ ಸ್ನಾತಕೋತ್ತರ ಪದವಿಯನ್ನು ಹೊಂದಿ ಸರ್ಕಾರಿ ವೈದ್ಯಕೀಯ ಕಾಲೇಜು/ಸಂಸ್ಥೆಗಳಲ್ಲಿ ಕನಿಷ್ಠ 10 ವರ್ಷ ಪ್ರಾಧ್ಯಾಪಕರು/ಸಹಪ್ರಾಧ್ಯಾಪಕರು/ರೀಡರ್ ಆಗಿ ಕರ್ತವ್ಯ ನಿರ್ವಹಿಸಿದ ಬೋಧನಾ ಅನುಭವ ಹೊಂದಿರಬೇಕು. ಈ ಪೈಕಿ ವಿಭಾಗವೊಂದರಲ್ಲಿ ಕನಿಷ್ಠ 5 ವರ್ಷ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿರಬೇಕು. ಈ ಹುದ್ದೆಗಳ ನೇಮಕಾತಿಯಲ್ಲಿ ವಿಭಾಗದ ಮುಖ್ಯಸ್ಥರಿಗೆ ಆದ್ಯತೆ ನೀಡಲಾಗುವುದು. ನಿರ್ದೇಶಕರ ಆಯ್ಕೆಯನ್ನು ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿ ಪ್ರಕಾರ ಹಾಗೂ ಸಂಸ್ಥೆಗಳ ಬೈಲಾ ರೀತ್ಯಾ ಮಾಡಲಾಗುವುದು.
2. ಅಭ್ಯರ್ಥಿಗಳು ವೈದ್ಯಕೀಯ ಅಧೀಕ್ಷಕರಾಗಿ ಆಡಳಿತಾನುಭವ ಹೊಂದಿರಬೇಕು ಅಥವಾ ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರಾಗಿ 5 ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದವರಿಗೆ ಆದ್ಯತೆ ನೀಡಲಾಗುವುದು.
3. ಅರ್ಜಿ ಸಲ್ಲಿಸುವ ಅಭ್ಯರ್ಥಿಯ ವಯಸ್ಸು 58 ವರ್ಷಗಳನ್ನು ಮೀರಿರಬಾರದು ಅಥವಾ ವಯೋನಿವೃತ್ತಿ ಹೊಂದಲು ಕನಿಷ್ಠ 2 ವರ್ಷಗಳ ಸೇವಾ ಅವಧಿ ಬಾಕಿ ಇರಬೇಕು.
4. ಅಭ್ಯರ್ಥಿಯು ಖಾಯಂ ಪೂರ್ವ ಸೇವಾ ಅವಧಿಯನ್ನು ಪೂರ್ಣಗೊಳಿಸಿರಬೇಕು.
5. ನಿರ್ದೇಶಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾವಳಿಗಳನ್ನು ಪೂರೈಸಿರಬೇಕು.

**ವೇತನ ಶ್ರೇಣಿ:**– 37,400–67,000 + ಎ.ಜಿ.ಪಿ 10,000/– ಮತ್ತು ಅನ್ವಯವಾಗುವ ಭತ್ಯೆಗಳು

**ಸೇವಾವಧಿ:–**

ನೇಮಕಾತಿಯ ದಿನಾಂಕದಿಂದ ನಾಲ್ಕು ವರ್ಷಗಳು, ಅಥವಾ ಮುಂದಿನ ಸರ್ಕಾರದ ಆದೇಶದವರೆಗೆ (ಯಾವುದು ಮೊದಲೊ ಅಲ್ಲಿಯವರೆಗೆ)

3. ನಿಗದಿತ ಅರ್ಜಿ ನಮೂನೆಯನ್ನು ಡಿ.ಎಂ.ಇ. ವೆಬ್‌ಸೈಟ್: www.karnataka.gov.in/dmekarnataka ಅಥವಾ ಕಿಮ್ಸ್, ಕೊಪ್ಪಳ, ವೆಬ್‌ಸೈಟ್: www.kimskoppal.kar.nic.in ಇಲ್ಲಿಂದ ಡೌನ್‌ಲೋಡ್ ಮಾಡಿಕೊಂಡು, ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಬೆಂಗಳೂರು ಇವರ ಹೆಸರಿನಲ್ಲಿ ರೂ. 5000/–ಗಳ (ಹಿಂದಿರುಗಿಸಲಾಗದಿರುವ) ಡಿಮ್ಯಾಂಡ್ ಡ್ರಾಫ್ಟ್ ಅನ್ನು ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ (ಅಗತ್ಯ ದಾಖಲೆಗಳು ಸೇರಿದಂತೆ) ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದ ರಾವ್ ವೃತ್ತ ಬೆಂಗಳೂರು–560009 ರವರಿಗೆ ನೊಂದಾಯಿತ ಅಂಚೆ ಮುಖಾಂತರ ಸ್ವೀಕೃತಿ ಬಾಕಿ ಪತ್ರದೊಂದಿಗೆ **ದಿನಾಂಕ: 17–09–2018ರಂದು ಸಂಜೆ 5:00 ಗಂಟೆಯೊಳಗೆ** ತಲುಪಿಸತಕ್ಕದ್ದು.

ವೈದ್ಯಕೀಯ ಶಿಕ್ಷಣ ನಿರ್ದೇಶಕರು,ಬೆಂಗಳೂರು